# Akashvani : Bangalore
# Regional Bulletin In Kannada
# 19.04.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

೧. ಸ್ವಾತಂತ್ರ್ಯ ಬಂದು ೭೫ ವರ್ಷಗಳಾದರೂ ಅಸ್ಪೃಶ್ಯತೆ, ಬಡತನ ನಿರ್ಮೂಲನೆಯಾಗಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಜಾತಿ ಗಣತಿ ವಿಚಾರದಲ್ಲಿ ಲಿಂಗಾಯತ ಸಚಿವರಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ - ಸಚಿವ ಎಂ.ಬಿ. ಪಾಟೀಲ್ ಸ್ಪಷ್ಟನೆ

೩. ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ವಿದ್ಯಾರ್ಥಿಗೆ ಪ್ರವೇಶ ನಿರಾಕರಣೆ ಆರೋಪ ; ಶಿಕ್ಷಣ ಇಲಾಖೆ ಅಧಿಕಾರಿ ವಿರುದ್ಧ ಪ್ರಕರಣ ದಾಖಲು

೪. ದೈನಂದಿನ ಪ್ರಯಾಣಿಕರ ಸಂಖ್ಯೆಯಲ್ಲಿ ದಾಖಲೆ ಬರೆದ ನಮ್ಮ ಮೆಟ್ರೋ

೫. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಇನ್ನು ೫ ದಿನ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ಸ್ವಾತಂತ್ರ್ಯ ಬಂದು ೭೫ ವರ್ಷಗಳಾದರೂ ಸಮಾಜದಲ್ಲಿ ಅಸ್ಪೃಶ್ಯತೆ, ಬಡತನ ನಿರ್ಮೂಲನೆ ಮಾಡಲು ಸಾಧ್ಯವಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ತುಮಕೂರಿನಲ್ಲಿ ಕುರುಬರ ಸಾಂಸ್ಕೃತಿಕ ಪರಿಷತ್ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಬರೆದ ಸಂವಿಧಾನ ಇಲ್ಲದೇ ಹೋಗಿದ್ದರೆ ನಾವ್ಯಾರೂ ಸ್ವತಂತ್ರ್ಯವಾಗಿ ಚಿಂತಿಸುವ ಅವಕಾಶವೇ ಇರುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಸಿದ್ದರಾಮಯ್ಯ, ಮುಖ್ಯಮಂತ್ರಿ (೩೦ ಸೆಕೆಂಡ್‌ಗಳು)

ಇಂದಿನ ದಿನಗಳಲ್ಲಿ ನಾವು ವೈಜ್ಞಾನಿಕವಾಗಿ ಹಾಗೂ ವೈಚಾರಿಕವಾಗಿ ಚಿಂತಿಸುವುದು ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ, ವಿಧಾನ ಪರಿಷತ್ ಮಾಜಿ ಸದಸ್ಯ ಡಾ.ಎಂ.ಆರ್.ಹುಲಿನಾಯ್ಕರ್, ಪ್ರೊ.ಬಿ.ಕೆ.ರವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

**<><*<><>*><>**

ಜಾತಿ ಗಣತಿ ವರದಿ ವಿಷಯಗಳಿಗೆ ಲಿಂಗಾಯತ ಸಮುದಾಯದ ಎಲ್ಲಾ ೭ ಸಚಿವರು ಒಗ್ಗಟ್ಟಾಗಿದ್ದೇವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಸಚಿವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ ಬಳಿಕ ವಿಶೇಷ ಸಂಪುಟ ಸಭೆಯಲ್ಲಿ ಭಾಗವಹಿಸಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ಜಾತಿ ಗಣತಿ ವರದಿಯನ್ನು ೪ ವರ್ಷಗಳ ನಂತರವೂ

ಜಾರಿಗೆ ತರಲು ಸಾಧ್ಯವಿಲ್ಲ ಎಂಬ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ವಿಜಯೇಂದ್ರ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಅಲ್ಲ ಎಂದು ಹೇಳಿದ್ದಾರೆ.

**<><*<><>*><>**

ಶಿವಮೊಗ್ಗದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ ಸಂದರ್ಭದಲ್ಲಿ ಜನಿವಾರ ಧರಿಸಿದ ವಿದ್ಯಾರ್ಥಿಗಳಿಗೆ ಪ್ರವೇಶ ನಿರಾಕರಿಸಿದ ಆರೋಪದ ಮೇಲೆ ಶಿಕ್ಷಣ ಇಲಾಖೆ ಅಧಿಕಾರಿಯೊಬ್ಬರ ವಿರುದ್ಧ ಪ್ರಕರಣ ದಾಖಲಾಗಿದೆ. ಶಿವಮೊಗ್ಗದ ದೊಡ್ಡಪೇಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಕುರಿತಂತೆ ಪ್ರತಿಕ್ರಿಯಿಸಿದ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಇದು ಮಹಾ ಪ್ರಮಾದವಾಗಿದ್ದು, ಇದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ವಿದ್ಯಾರ್ಥಿಯ ಜನಿವಾರ ತೆಗೆಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಪೇಜಾವರದ ಶ್ರೀ ವಿಶ್ವಪ್ರಸನ್ನ ಸ್ವಾಮೀಜಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಪಟ್ಟಣದಲ್ಲಿಂದು ಮಾತನಾಡಿದ ಅವರು, ಇದು ಅವಮಾನಕರ ವಿಚಾರ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಸಿಇಟಿ ಪರೀಕ್ಷೆ ಬರೆಯಲು ಹೋದ ವಿದ್ಯಾರ್ಥಿಯ ಜನಿವಾರ ತೆಗೆಸಿರುವುದು ಜನರ ನಂಬಿಕೆ ಮೇಲೆ ಪ್ರಹಾರ ನಡೆಸಿದಂತೆ ಆಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅಭಿಪ್ರಾಯಪಟ್ಟಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೊಂದು ಧಾರ್ಮಿಕ ನಂಬಿಕೆಯಾಗಿದ್ದು, ಸರ್ಕಾರ ಗಂಭೀರವಾಗಿ ಪರಿಗಣಿಸಿ ಇದಕ್ಕೊಂದು ಸ್ಪಷ್ಟ ಮಾರ್ಗಸೂಚಿ ಹೊರಡಿಸಬೇಕು ಎಂದು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ಕಾರ ಹೋಂ ಗಾರ್ಡ್ ಅಮಾನತು ಮಾಡಿರುವುದು ಸರಿಯಲ್ಲ ಎಂದು ಹೇಳಿದ್ದಾರೆ.

**ಧ್ವನಿ : ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ (೨೭ ಸೆಕೆಂಡ್‌ಗಳು)**

**<><*<><>*><>**

ನಮ್ಮ ಮೆಟ್ರೋ ದೈನಂದಿನ ಪ್ರಯಾಣಿಕರ ಸಂಖ್ಯೆಯಲ್ಲಿ ದಾಖಲೆ ಬರೆದಿದೆ. ಏಪ್ರಿಲ್ ೧೭ ರಂದು ಮೆಟ್ರೋದಲ್ಲಿ ದಾಖಲೆಯ ಸಂಖ್ಯೆಯ ಒಟ್ಟು ೯ ಲಕ್ಷದ ೮ ಸಾವಿರದ ೧೫೩ ಜನರು ಪ್ರಯಾಣಿಸಿದ್ದಾರೆ ಎಂದು ಬಿಆರ್‌ಸಿಎಲ್ ತಿಳಿಸಿದೆ. ಬೆಂಗಳೂರು ಟ್ರಾಫಿಕ್ ನಿಂದ ತತ್ತರಿಸಿರುವ ಲಕ್ಷಾಂತರ ಮಂದಿ ಮೆಟ್ರೋವನ್ನೇ ಅವಲಂಬಿಸುತ್ತಿದ್ದಾರೆ. ಬಿಎಂಆರ್‌ಸಿಎಲ್ ಬಿಡುಗಡೆ ಮಾಡಿದ ದತ್ತಾಂಶದ ಪ್ರಕಾರ ನೇರಳೆ ಮಾರ್ಗದಲ್ಲಿ ೪ ಲಕ್ಷ ೩೫ ಸಾವಿರದ ೫೧೬ ಮಂದಿ ಪ್ರಯಾಣಿಸಿದ್ದಾರೆ. ಹಸಿರು ಮಾರ್ಗದಲ್ಲಿ ೨ ಲಕ್ಷ ೮೫ ಸಾವಿರದ ೨೪೦ ಮಂದಿ ಸಂಚರಿಸಿದ್ದಾರೆ. ಕೆಂಪೇಗೌಡ ನಿಲ್ದಾಣದಲ್ಲಿ ೧ ಲಕ್ಷದ ೮೭ ಸಾವಿರದ ೩೯೭ ಪ್ರಯಾಣಿಕರು ಮಾರ್ಗ ಬದಲಾಯಿಸಿದ್ದಾರೆ.

**<><*<><>*><>**

ಸಿಎಸ್‌ಆರ್ ಅನುದಾನ ಬಳಕೆ ಮಾಡಿಕೊಂಡು ಸಾಮಾಜಿಕ, ಅಭಿವೃದ್ಧಿ ಕಾರ್ಯಗಳೊಂದಿಗೆ ಶಿಕ್ಷಣ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆಗೆ ಕ್ರಮ ವಹಿಸಲಾಗುತ್ತಿದೆ ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರ ಜಿಲ್ಲೆಯ ಬಬಲೇಶ್ವರ ಮತಕ್ಷೇತ್ರದ ಕೊಟ್ಯಾಳ ಗ್ರಾಮದಲ್ಲಿ ಸರಕಾರಿ ಶಾಲೆಯ ೧೦ ಸುಸಜ್ಜಿತ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಸಮಾಜ ಪ್ರಗತಿಯತ್ತ ಸಾಗಲು ಶಿಕ್ಷಣ

ಅತ್ಯವಶ್ಯಕವಾಗಿದೆ ಎಂದು ಹೇಳಿದ್ದಾರೆ. ಅಂತಾರಾಷ್ಟ್ರೀಯ ಕೆಂಪೇಗೌಡ ವಿಮಾನ ನಿಲ್ದಾಣ ಪ್ರತಿಷ್ಠಾನ ಶಾಲಾ ಕೊಠಡಿಗಳ ನಿರ್ಮಾಣ ಮಾತ್ರವಲ್ಲದೇ ಭವಿಷ್ಯದಲ್ಲಿ ಶಿಕ್ಷಕರ ಕೊರತೆ ಎದುರಾದಲ್ಲಿ ಸಂಸ್ಥೆಯಿಂದಲೇ ಶಿಕ್ಷಕರ ವೇತನ ಪಾವತಿ ಮಾಡುವ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ ಎಂದು ತಿಳಿಸಿದ್ದಾರೆ. ಪ್ರತಿಷ್ಠಾನದ ಸಿಎಸ್ಆರ್ ಅನುದಾನದಲ್ಲಿ ಬಬಲೇಶ್ವರ ಮತಕ್ಷೇತ್ರದ ಕೋಟ್ಯಾಳ ಹಾಗೂ ಕಾತ್ರಾಳದಲ್ಲಿ ತಲಾ ೨ ಕೋಟಿ ೫೦ ಲಕ್ಷ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

<><*<><>*><>

ಯು.ಆರ್. ರಾವ್ ಉಪಗ್ರಹ ಕೇಂದ್ರ ಮತ್ತು ಜವಾಹರ್ ಲಾಲ್ ನೆಹರು ತಾರಾಲಯ ವತಿಯಿಂದ ಆರ್ಯಭಟ ಉಡಾವಣೆಯ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಬೆಂಗಳೂರಿನಲ್ಲಿಂದು ಹಮ್ಮಿಕೊಳ್ಳಲಾಗಿತ್ತು. ಖಗೋಳ ವಿಜ್ಞಾನ ಕ್ಷೇತ್ರದಲ್ಲಿ ವಿಫುಲ ಅವಕಾಶಗಳಿದ್ದು ಇವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು  ಭಾರತೀಯ ಖಗೋಳ ವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಅನ್ನಪೂರ್ಣಿ ಸುಬ್ರಹ್ಮಣ್ಯನ್ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಜವಾಹರ್ ಲಾಲ್ ನೆಹರು ತಾರಾಲಯದ ನಿರ್ದೇಶಕ ಬಿ. ಆರ್. ಗುರುಪ್ರಸಾದ್  ಮಾತನಾಡಿ ವಿದ್ಯಾರ್ಥಿಗಳಿಗೆ ವಿಜ್ಞಾನ, ಅಂತರಿಕ್ಷ, ಬಾಹ್ಯಾಕಾಶದ ಕುರಿತು ಮತ್ತಷ್ಟು ತಿಳವಳಿಕೆ ನೀಡಿ, ಅವರನ್ನು ಸೆಳೆಯುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯಾದ್ಯಂತ ೭ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಇದೇ ಏಪ್ರಿಲ್ ೨೬ ರಿಂದ ಜೂನ್ ೦೯ ರವರೆಗೆ ನಡೆಯಲಿದ್ದು, ಲಸಿಕಾ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಪಶು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಾನುವಾರುಗಳಿಗೆ ಉಚಿತ  ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಜೊತೆಗೆ  ಚರ್ಮಗಂಟು ರೋಗದ ಲಸಿಕೆಯನ್ನು ನೀಡಲಾಗುತ್ತಿದೆ. ತಪ್ಪದೇ ಲಸಿಕೆಯನ್ನು ಹಾಕಿಸಿ, ರೋಗ ಬರದಂತೆ ಜಾನುವಾರುಗಳನ್ನು ರಕ್ಷಿಸಿ ಎಂದು ಮನವಿ ಮಾಡಿದ್ದಾರೆ.

<><*<><>*><>

೨೦೨೩-೨೪ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಕೊಪ್ಪಳ ಜಿಲ್ಲೆಗೆ ರಾಷ್ಟ್ರಮಟ್ಟದ ಪ್ರಶಸ್ತಿ ಲಭಿಸಿದೆ ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ತಿಳಿಸಿದ್ದಾರೆ. ೨೦೨೩-೨೪ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಒಟ್ಟು ೭೪ ಸಾವಿರದ ೭೮೧ ರೈತರನ್ನು ಬೆಳೆವಿಮೆ ನೋಂದಾವಣೆ ಮಾಡಲಾಗಿರುತ್ತದೆ.  ಒಟ್ಟು ೮೬ ಕೋಟಿ ರೂಪಾಯಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ರೈತರಿಗೆ ನೀಡಲಾಗಿದೆ ಎಂದು ಕೊಪ್ಪಳ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಟಿ.ಎಸ್ ರುದ್ರೇಶಪ್ಪ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಟಿ.ಎಸ್ ರುದ್ರೇಶಪ್ಪ  (೩೦ ಸೆಕೆಂಡ್‌ಗಳು)**

<><*<><>*><>

ಇನ್ನು ಹವಾವರ್ತಮಾನ,

ಬೆಂಗಳೂರು ಸೇರಿದಂತೆ ಕರ್ನಾಟಕದ ಒಳನಾಡಿನ ಕೆಲವೆಡೆ ಮಳೆಯಾಗಿದೆ. ದಕ್ಷಿಣ ಕನ್ನಡ, ಉತ್ತರಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇಂದು ಹಗುರದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

,ಮುಂದಿನ ೫ ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗಲಿದೆ. ಗರಿಷ್ಠ ಉಷ್ಣಾಂಶ ಕಲಬುರಗಿಯಲ್ಲಿ ೪೦.೬ ಡಿಗ್ರಿ ದಾಖಲಾಗಿದೆ. ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<><>*><>**

ನೈಋತ್ಯ ರೈಲ್ವೆ ಇಂದು ಗದಗ ರಸ್ತೆಯಲ್ಲಿರುವ ಹುಬ್ಬಳ್ಳಿ ರೈಲು ವಸ್ತುಸಂಗ್ರಹಾಲಯದಲ್ಲಿ ವಿಶೇಷ ಪರಂಪರಾ ನಡಿಗೆಯೊಂದಿಗೆ ವಿಶ್ವ ಪರಂಪರಾ ದಿನ ಆಚರಿಸಿತು. ನೈಋತ್ಯ ರೈಲ್ವೆ ವಲಯದ ಮಹಾಪ್ರಬಂಧಕ ಮುಕುಲ್ ಸರನ್ ಮಾಥುರ್ ರೈಲು ವಸ್ತುಸಂಗ್ರಹಾಲಯವನ್ನು ವೀಕ್ಷಿಸಿ, ಭಾರತೀಯ ರೈಲ್ವೆಯ ಶ್ರೀಮಂತ ಪರಂಪರೆ ಮತ್ತು ಸಂರಕ್ಷಿತ ಇತಿಹಾಸದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ರೈಲ್ವೆ ಪರಂಪರೆಯನ್ನು ಕಾಪಾಡುವಲ್ಲಿ ಮತ್ತು ಪ್ರದರ್ಶಿಸುವಲ್ಲಿ ಕಾರ್ಯಾಗಾರದ ಸಿಬ್ಬಂದಿಯ ಸೃಜನಶೀಲತೆ ಮತ್ತು ಸಮರ್ಪಣೆಯನ್ನು ಅವರು ಶ್ಲಾಘಿಸಿದ್ದಾರೆ. ಬಳಿಕ ಮಾತನಾಡಿದ ಅವರು, ರೈಲ್ವೆಯು ತನ್ನದೇ ಆದ ಇತಿಹಾಸವನ್ನು ಹೊಂದಿರುವ ಏಕೈಕ ಸಂಸ್ಥೆಯಾಗಿದ್ದು, ಇವುಗಳನ್ನು ಸಂರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**